ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE DEPT.

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE:

# ಅಧಿವೇಶನ ಇಂದು ಕೊನೆ?

23-3-20

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕೊರೊನಾ ವೈರಸ್ ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ವಿಧಾನಮಂಡಲ ಅಧಿವೇಶನ ಸೋಮವಾರವೇ ಕೊನೆಗೊಳಿಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಲೇಖಾನುದಾನಕ್ಕೆ ಒಪ್ಪಿಗೆ ಪಡೆದುಕೊಂಡು ಅಧಿವೇಶನ ಅನಿರ್ದಿಷ್ಟ ಕಾಲ ಮುಂದೂಡಲು ಮುಖ್ಯಮಂತ್ರಿ ಯಡಿಯೂರಪ್ಪ ಮತ್ತು ವಿರೋಧ ಪಕ್ಷಗಳ ಮುಖಂಡರು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿಯವರಿಗೆ ಸಲಹೆ ನೀಡಿದ್ದಾರೆ. ಅದನ್ನು ಕಾಗೇರಿ ಒಪ್ಪಿಕೊಂಡಿದ್ದಾರೆ ಮೂಲಗಳು ಹೇಳಿವೆ.

'ನೂರಾರು ಮಂದಿ ಒಂದೆಡೆ ಸೇರಬಾರದು ಎಂದು ತಾಕೀತು ಮಾಡುವ ಸರ್ಕಾರ ನೂರಾರು ಜನ ಪ್ರತಿನಿಧಿಗಳು, ಅಧಿಕಾರಿಗಳು, ಪತ್ರಕರ್ತರು ಹಾಗೂ ಜನರು ಜಮಾಯಿಸುವ ಅಧಿವೇಶನ ನಡೆಸುವುದು ವಾಸ್ತವ ಪರಿಸ್ಥಿತಿಯಲ್ಲಿ ಸರಿಯಲ್ಲ' ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರ-ಸ್ವಾಮಿ ತಿಳಿಸಿದ್ದಾರೆ.